# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೈಸೂರು ಜಿಲ್ಲೆ ಟಿ.ನರಸೀಪುರ ಮತ್ತು ಮಂಡ್ಯ ತಾಲ್ಲೂಕು ಪಂಚಾಯತಿಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ವೇತನ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಪ್ರಸ್ತಾವನೆಗಳು

ಪ್ರಸ್ತಾವನೆ:

ಮೈಸೂರು ಜಿಲ್ಲೆ ಟಿ. ನರಸೀಪುರ ಮತ್ತು ಮಂಡ್ಯ ಜಿಲ್ಲೆ ಮಂಡ್ಯ ತಾಲ್ಲೂಕು ಪಂಚಾಯತಿಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ವೇತನ ವೆಚ್ಚಕ್ಕಾಗಿ ಅನುಕ್ರಮವಾಗಿ ರೂ.2.44ಲಕ್ಷ ಮತ್ತು ರೂ7.20ಲಕ್ಷ ಒಟ್ಟು ರೂ.9.64ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ 2020-21ನೇ ಸಾಲಿನಲ್ಲಿ ಒದಗಿಸಿದ್ದ ಅನುದಾನವನ್ನೇ 2021-22ನೇ ಸಾಲಿಗೂ (ಪೂರ್ಣ ಅವಧಿಗೆ) ಬಿಡುಗಡೆಗೊಳಿಸಿ ಇದೇ ಸಂಬಂಧ ಈ ತಾಲ್ಲೂಕು ಪಂಚಾಯತಿಗಳಿಂದ ಮತ್ತೊಮ್ಮೆ ಪ್ರಸ್ತಾವನೆ ಸ್ವೀಕೃತವಾದಲ್ಲಿ ಪರಿಗಣಿಸಲಾಗುವುದಿಲ್ಲವೆಂಬ ಷರತ್ತಿನೊಂದಿಗೆ ಲೆಕ್ಕ ಶೀರ್ಷಿಕೆ 2515-00-197-1-10-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 239 ವೆಚ್ಚ 6/2021(ಇ) ದಿನಾಂಕ: 28ನೇ ಏಪ್ರಿಲ್ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ವೇತನಕ್ಕಾಗಿ ಒಟ್ಟು ರೂ9.64ಲಕ್ಷ (ರೂಪಾಯಿ ಒಂಬತ್ತು ಲಕ್ಷದ ಅರವತ್ನಾಲ್ಕು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

| ಕ್ರ.ಸಂ. | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ.ಗಳಲ್ಲಿ) |
|---|---|---|---|---|
| 1 | 2 | 3 | 4 | 5 |
| 1 | ಮಂಡ್ಯ | 2515-00-102-0-63-033 | 7.20 | 7.20 |
| 2 | ಟಿ.ನರಸೀಪುರ | 2515-00-102-0-63-033 | 2.44 | 2.44 |
| | **ಒಟ್ಟು** | | **9.64** | **9.64** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

1416312680
29.4.21

M. Manjunath 28/4/21
(ಎಂ. ಮಂಜುನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿಪಂ)
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು

6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಂಡ್ಯ/ಟಿ.ನರಸೀಪುರರವರಿಗೆ
7. ಸಂಬಂಧಿಸಿದ ಜಿಲ್ಲಾ/ಉಪ ವಿಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ